ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1001 (1038)

ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

ಉತ್ತರಿಸುವ ದಿನಾಂಕ : 29.09.2020

ಕ್ರ.ಸಂ.	ಪ್ರಶ್ನೆ	ಉತ್ತರ
ಅ).	ರಾಜ್ಯದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳನ್ನು ಸ್ಥಾಪಿಸುವ ಸಂದರ್ಭದಲ್ಲಿ 75% ಉದ್ಯೋಗವನ್ನು ಸ್ಥಳೀಯ ಕನ್ನಡಿಗರಿಗೆ ನೀಡುವ ಬಗ್ಗೆ ಸರ್ಕಾರದ ನಿಲುವೇನು; ಸ್ಥಳೀಯರಿಗೆ ಉದ್ಯೋಗ ಎಂಬುದರ ಕುರಿತು ಕಾನೂನು ಜಾರಿಗೆ ತರುವ ಪ್ರಸ್ತಾವನೆ ಕುರಿತು ಸರ್ಕಾರದ ನಿಲುವೇನು:	ಡಾ: ಸರೋಜಿನಿ ಮಹಿಷಿ ವರದಿಯ ಪ್ರಕಾರ ರಾಜ್ಯದಲ್ಲಿ ಚಾಲ್ತಿಯಲ್ಲಿರುವ 50 ಕ್ಕಿಂತ ಹೆಚ್ಚು ಕಾರ್ಮಿಕರುಳ್ಳ ಬೃಹತ್, ಮಧ್ಯಮ ಮತ್ತು ಸಣ್ಣ ಕೈಗಾರಿಕಾ ಘಟಕಗಳಲ್ಲಿ ಎ ಮತ್ತು ಬಿ ವರ್ಗಗಳಲ್ಲಿ ಕ್ರಮವಾಗಿ ಶೇಕಡ 65 ಮತ್ತು ಶೇಕಡ 80 ಹಾಗೂ ಸಿ ಮತ್ತು ಡಿ ವರ್ಗಗಳಲ್ಲಿ ಶೇಕಡ 100 ರಷ್ಟು ಉದ್ಯೋಗಗಳನ್ನು ಕನ್ನಡಿಗರಿಗೆ/ಸ್ಥಳೀಯರಿಗೆ ಒದಗಿಸುವ ಬಗ್ಗೆ ಕ್ರಮ ವಹಿಸಬೇಕಾಗಿರುತ್ತದೆ. ಅಲ್ಲದೆ, ಕೈಗಾರಿಕಾ ನೀತಿ 2014-19ರನ್ವಯ ಸರ್ಕಾರದಿಂದ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಪಡೆಯುವ ಕೈಗಾರಿಕಾ ಘಟಕಗಳು "ಡಿ" ವರ್ಗದ ಉದ್ಯೋಗಗಳಲ್ಲಿ ಶೇಕಡ 100 ರಷ್ಟು ಹಾಗೂ ಘಟಕದ ಒಟ್ಟಾರೆ ಉದ್ಯೋಗಗಳಲ್ಲಿ ಶೇಕಡ 70 ರಷ್ಟುನ್ನು ಕನ್ನಡಿಗರಿಗೆ/ಸ್ಥಳೀಯರಿಗೆ ನೀಡುವ ನಿಬಂಧನೆಯಿದ್ದು ಅದರಂತೆ ಉದ್ಯೋಗಗಳನ್ನು ನೀಡಿದ ಘಟಕಗಳಿಗೆ ಮಾತ್ರ ಅರ್ಹ ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ಮಂಜೂರು ಮಾಡಲಾಗುತ್ತಿದೆ.
ಆ)	ಕನ್ನಡ ನಾಡಿನ ಭೂಮಿ, ನೀರು, ಮೂಲಭೂತ ಸೌಕರ್ಯಗಳನ್ನು ಬಳಸುತ್ತಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳು ಸ್ಥಳೀಯ ಕನ್ನಡಿಗರಿಗೆ ಉದ್ಯೋಗ ನಿರಾಕರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಉದ್ಯೋಗ ನೀಡದಿರುವ ಕೈಗಾರಿಕೆಗಳ ಮೇಲೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ.	ಡಾ: ಸರೋಜಿನಿ ಮಹಿಷಿ ವರದಿಯನ್ವಯ ರಾಜ್ಯದಲ್ಲಿ ಚಾಲ್ತಿಯಲ್ಲಿರುವ 50 ಕ್ಕಿಂತ ಹೆಚ್ಚು ಕಾರ್ಮಿಕರುಳ್ಳ ಬೃಹತ್, ಮಧ್ಯಮ ಮತ್ತು ಸಣ್ಣ ಕೈಗಾರಿಕಾ ಘಟಕಗಳಲ್ಲಿ ಕನ್ನಡಿಗರಿಗೆ/ಸ್ಥಳೀಯರಿಗೆ ಉದ್ಯೋಗಗಳನ್ನು ಒದಗಿಸುವಂತೆ ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಗಳು ಹಾಗೂ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಗಳಲ್ಲಿ ಹೊಸ ಕೈಗಾರಿಕಾ ಘಟಕಗಳನ್ನು ಸ್ಥಾಪಿಸಲು ಒಪ್ಪಿಗೆಯನ್ನು ನೀಡುವ ಸಂದರ್ಭದಲ್ಲಿ ಷರತ್ತನ್ನು ವಿಧಿಸಲಾಗುತ್ತಿದೆ. ಸದರಿ ವರದಿಯನ್ವಯ ಕನ್ನಡಿಗರಿಗೆ/ಸ್ಥಳೀಯರಿಗೆ ಉದ್ಯೋಗ ನೀಡಿರುವ ಬಗ್ಗೆ ಜಿಲ್ಲಾ ಮಟ್ಟದಲ್ಲಿ ನಿಗದಿತ ನಮೂನೆಯಲ್ಲಿ ಮಾಹಿತಿಯನ್ನು ಕ್ರೋಢೀಕರಿಸಿ ಪರಿಶೀಲಿಸಿ ನಿರ್ದೇಶನಾಲಯಕ್ಕೆ

		ಹಾಗೂ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆಯುವ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಗಳಲ್ಲಿ ಸದರಿ ಮಾಹಿತಿಯನ್ನು ಪರಿಶೀಲಿಸಲಾಗುತ್ತದೆ. ನ್ಯೂನ್ಯತೆಗಳು ಕಂಡುಬಂದ ಕೈಗಾರಿಕೆಗಳಿಗೆ ಕೂಡಲೇ ಸರಿಪಡಿಸಲು ಸೂಚನೆಗಳನ್ನು ನೀಡಲಾಗುತ್ತದೆ.
ಇ)	ಕಳೆದ 2 ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಬೃಹತ್ ಕೈಗಾರಿಕೆಗಳು ಸ್ಥಾಪನೆಯಾಗಿವೆ; ಎಷ್ಟು ಸ್ಥಳೀಯರಿಗೆ ಉದ್ಯೋಗ ದೊರೆತಿದೆ? (ಜಿಲ್ಲಾವಾರು ಮಾಹಿತಿ ನೀಡುವುದು)	ಡಿಸೆಂಬರ್ 2019ರ ತ್ರೈಮಾಸಿಕ ಅಂತ್ಯಕ್ಕೆ ಡಾ: ಸರೋಜಿನಿ ಮಹಿಷಿ ವರದಿಯನ್ವಯ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ವ್ಯಾಪ್ತಿಯಲ್ಲಿ ಕ್ರೂಢೀಕರಿಸಿರುವ ಮಾಹಿತಿಯಂತೆ ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ (2018-19 ಮತ್ತು 2019-20) ಸ್ಥಾಪನೆಯಾದ 50 ಕ್ಕಿಂತ ಹೆಚ್ಚು ಕಾರ್ಮಿಕರುಳ್ಳ ಉತ್ಪಾದನಾ ವಲಯದ ಬೃಹತ್ ಕೈಗಾರಿಕೆಗಳಲ್ಲಿ ಕನ್ನಡಿಗರಿಗೆ/ಸ್ಥಳೀಯರಿಗೆ ಉದ್ಯೋಗ ನೀಡಿರುವ ಜಿಲ್ಲಾವಾರು ಮಾಹಿತಿಯನ್ನು **ಅನುಬಂಧದಲ್ಲಿ** ನೀಡಿದೆ.

ಸಿಐ 272 ಎಸ್‌ಪಿಐ 2020

(ಜಗದೀಶ್ ಶೆಟ್ಟರ್)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎನ್. ರವಿಕುಮಾರ್ ರವರ ಪ್ರಶ್ನೆ ಸಂಖ್ಯೆ 1038ರ ಉತ್ತರಕ್ಕೆ ಅನುಬಂಧ

ರಾಜ್ಯದಲ್ಲಿ ಕಳೆದ 2 ವರ್ಷಗಳಲ್ಲಿ ಸ್ಥಾಪನೆಯಾದ 50 ಕ್ಕಿಂತ ಹೆಚ್ಚು ಕಾರ್ಮಿಕರುಳ್ಳ ಬೃಹತ್ ಕೈಗಾರಿಕೆಗಳಲ್ಲಿ ಕನ್ನಡಿಗರಿಗೆ/ಸ್ಥಳೀಯರಿಗೆ ಉದ್ಯೋಗ ನೀಡಿರುವ ಜಿಲ್ಲಾವಾರು ಮಾಹಿತಿ

ಕ್ರಮ ಸಂ	ವಿವರ	ಎ–ವರ್ಗ				ಬಿ–ವರ್ಗ				ಸಿ–ವರ್ಗ				ಡಿ–ವರ್ಗ				ಒಟ್ಟು			
		ಕನ್ನಡಿಗರು	ಇತರೆ	ಒಟ್ಟು	ಶೇಕಡ	ಕನ್ನಡಿಗರು	ಇತರೆ	ಒಟ್ಟು	ಶೇಕಡ	ಕನ್ನಡಿಗರು	ಇತರೆ	ಒಟ್ಟು	ಶೇಕಡ	ಕನ್ನಡಿಗರು	ಇತರೆ	ಒಟ್ಟು	ಶೇಕಡ	ಕನ್ನಡಿಗರು	ಇತರೆ	ಒಟ್ಟು	ಶೇಕಡ
1	2	3	4	5	6	7	8	9	10	11	12	13	14	15	16	17	18	19	20	21	22
	ಬೆಂಗಳೂರು ಗ್ರಾಮಾಂತರ ಜಿಲ್ಲೆ																				
1)	ಮುಸಾಷಿ ಆಟೋ ಪಾರ್ಟ್ಸ್ ಪ್ರೈ.ಲಿ ಕೆ.ಐ.ಎ.ಡಿ.ಬಿ ಇಂಡಸ್ಟ್ರಿಯಲ್ ಏರಿಯಾ, ದೊಡ್ಡಬಳ್ಳಾಪುರ	3	7	10	30	8	13	31	58	65	47	112	58	449	115	564	80	535	182	717	75
2)	ಕೆಹಿನ್ ಫೈ ಪ್ರೈವೇಟ್ ಲಿ., 3ನೇ ಹಂತ, ಕೈಗಾರಿಕಾ ಪ್ರದೇಶ, ದೊಡ್ಡಬಳ್ಳಾಪುರ	3	1	4	75	4	2	6	67	10	3	13	77	25	5	30	83	42	11	53	79
3)	ಸ್ಪಿರಾಗ್ ಕರ್ಟ್ ವೆಷಿನ್ ಟೂಲ್ಸ್ ಪ್ರೈ.ಲಿ, ಏರೋಸ್ಪೇಸ್ ಪಾರ್ಕ್, ದೇವನಹಳ್ಳಿ	1	0	1	100	10	3	13	77	17	2	19	89	0	0	0	0	28	5	33	85

1	2	3	4	5	6	7	8	9	10	11	12	13	14	15	16	17	18	19	20	21	22
4)	ವಿಪ್ರೊ ಲಿಮಿಟೆಡ್, ಏರೋಸ್ಪೇಸ್ ಪಾರ್ಕ್, ದೇವನಹಳ್ಳಿ	1	0	1	100	9	1	10	90	35	5	40	87	43	0	43	100	88	6	94	94
5)	ಆಮ್ ಡಾ (ಇಂಡಿಯಾ) ಪ್ರೈ ಲಿಮಿಟೆಡ್, ಏರೋಸ್ಪೇಸ್ ಪಾರ್ಕ್, ಕೈಗಾರಿಕಾ ಪ್ರದೇಶ, ದೇವನಹಳ್ಳಿ	1	0	1	100	15	4	19	79	38	9	47	81	17	1	18	94	71	14	85	84
	ವಿಜಯಪುರ ಜಿಲ್ಲೆ																				
6)	ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ನಿ. ಸಾ: ಮರಗೂರ ತಾ: ಇಂಡಿ ಜಿ: ವಿಜಯಪುರ	6	1	7	86	35	0	35	100	47	0	47	100	162	0	162	100	250	1	251	89
	ಕಲಬುರಗಿ ಜಿಲ್ಲೆ																				
7)	ಶ್ರೀ ಸಿಮೆಂಟ್ ಲಿಮಿಟೆಡ್ ಬೆನಕನಹಳ್ಳಿ ಗ್ರಾಮ, ಕೋಡ್ಲಾ ತಾಃಸೇಡಂ ಜಿಃಕಲಬುರಗಿ	4	2	6	67	46	10	56	82	227	0	227	100	670	0	670	100	947	12	959	99
	ದಕ್ಷಿಣ ಕನ್ನಡ ಜಿಲ್ಲೆ																				
8)	ಜೆ.ಬಿ.ಎಫ್ ಪೆಟ್ರೋಕೆಮಿಕಲ್ಸ್ ಲಿ., ಮಂಗಳೂರು ತಾಲ್ಲೂಕು	14	4	18	78	51	5	56	91	100	0	100	100	42	0	42	100	207	9	216	96

1	2	3	4	5	6	7	8	9	10	11	12	13	14	15	16	17	18	19	20	21	22
	ರಾಮನಗರ ಜಿಲ್ಲೆ																				
9)	ಆಂತೆಮ್ ಬಯೋ ಸೈನ್ಸ್ ಪ್ರೈ.ಲಿ., ಕೆ.ಐ.ಎ.ಡಿ.ಬಿ. ಕೈಗಾರಿಕಾ ಪ್ರದೇಶ, 2ನೇ ಹಂತ, ಕನಕಪುರ ತಾಲ್ಲೂಕು	26	4	30	87	118	35	153	77	70	0	70	100	6	0	6	100	220	39	259	85
10)	ಎಂ.ಕೆ.ಆಗ್ರೋಟೆಕ್ ಪ್ರೈ.ಲಿ., ಎಂ.ಬಿ. ರಸ್ತೆ, ಶ್ರೀರಂಗಪಟ್ಟಣ ಸೋಲೂರು ಗ್ರಾಮ, ಮಾಗಡಿ ತಾಲ್ಲೂಕು, ರಾಮನಗರ.	1	0	1	100	3	1	4	75	8	2	10	80	8	2	10	80	20	5	25	80